**ಸಾಕ್ಷಿಗೆ ದಿನಾಂಕ 24.03.2026 ರಂದು ಪ್ರಮಾಣ ವಚನ ನೀಡಲಾಯಿತು.**

**ಪಾಟೀಸವಾಲುಃ ಆರೋಪಿ ಪರ ಶ್ರೀ ವಕೀಲರಿಂದಃ**

ಚಾಸಾ-1 ರವರು ಠಾಣಾಗೆ ಹಾಜರಾಗಿ ಹೇಳಿಕೆ ದೂರನ್ನು ದಾಖಲಿಸಿಲ್ಲ ಎಂದರೆ ಸರಿಯಲ್ಲ. ನಾನು ಸ್ಥಳಕ್ಕೆ ಬೇಟಿ ನೀಡಿಲ್ಲ, ಚಾಸಾ-7 ಮತ್ತು 8 ರವರ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಚಾಸಾ-2 ರಿಂದ 6 ರವರ ಹೇಳಿಕೆಯ ಪಡೆದುಕೊಂಡಿಲ್ಲ, ಠಾಣೆಯಲ್ಲಿ ಹೇಳಿಕೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಠಾಣೆಯಲ್ಲಿ ಪಂಚನಾಮೆ ಬರೆದಿದ್ದು, ಸ್ಥಳದಲ್ಲಿ ನಿಪಿ-3 ರನ್ನು ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರು ಸಹ ಚಾಸಾ-1 ರವರಿಗೆ ಸಹಾಯವಾಗಲೆಂದು ಸುಳ್ಳು ಪ್ರಕರಣ ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ.**

**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.**

**ಓ.ಹೇ.ಕೇ.ಸರಿ ಇದೆ.**

**ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಧೀಶರು, ಹುಣಸೂರು.**